**ಕರ್ನಾಟಕ ಸರ್ಕಾರ**

ಸಂಖ್ಯೆ: ಸಕಇ 26 ಎಸ್‌ಪಿಎ 2018(ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:08.05.2020

**ಅಧಿಸೂಚನೆ**

ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ನಿಯಮಗಳು, 2020

ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ 46)ರ 12 ಮತ್ತು 13ನೇ ಪ್ರಕರಣಗಳಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ನಿಯಮಗಳು, 2020ರ ಕರಡು ಅಧಿಸೂಚನೆ ಸಂಖ್ಯೆ: ಸಕಇ 26 ಎಸ್‌ಪಿಎ 2018(ಭಾಗ), ದಿನಾಂಕ:07.01.2020ರಂದು ಸದರಿ ಅಧಿನಿಯಮದ 13ನೇ ಪ್ರಕರಣದ (1)ನೇ ಉಪ–ಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ, ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ದಿನಾಂಕ:13.02.2020ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿ, ಆಕ್ಷೇಪಣೆ ಅಥವಾ ಸಲಹೆಯನ್ನು ಸ್ವೀಕರಿಸಲು 15 ದಿನಗಳ ಕಾಲಾವಕಾಶ ನೀಡಲಾಗಿದ್ದು, ಯಾವುದೇ ಆಕ್ಷೇಪಣೆ ಅಥವಾ ಸಲಹೆಗಳು ಸ್ವೀಕೃತವಾಗಿರುವುದಿಲ್ಲ.

ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ 46)ರ 12 ಮತ್ತು 13ನೇ ಪ್ರಕರಣಗಳಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಕೆಳಕಂಡಂತೆ ನಿಯಮಗಳನ್ನು ರೂಪಿಸಲಾಗಿದೆ.

ನಿಯಮಗಳು

1. **ಹೆಸರು ಮತ್ತು ಆರಂಭ;** (1) ಈ ನಿಯಮಗಳನ್ನು ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ನಿಯಮಗಳು, 2020 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಸರ್ಕಾರಿ ರಾಜ್ಯಪತ್ರದಲ್ಲಿ ಅವುಗಳ ಅಂತಿಮ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು:–** (1) ಈ ನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) **"ಅಧಿನಿಯಮ"** ಎಂದರೆ, ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ಅಧಿನಿಯಮ, 2017.

(ಬಿ) **"ನೋಡಲ್ ಇಲಾಖೆ" ಎಂದರೆ,** ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ; ಮತ್ತು

(ಸಿ) **"ಜಾಗೃತ ಅಧಿಕಾರಿಗಳು"** ಎಂದರೆ, ಅಧಿನಿಯಮದ 6ನೇ ಪ್ರಕರಣದಡಿ ನಿಯುಕ್ತನಾದ ಜಾಗೃತ ಅಧಿಕಾರಿ.

(2) ಈ ನಿಯಮದಲ್ಲಿ ಬಳಸಿರುವ ಆದರೆ ಪರಿಭಾಷಿಸದಿರುವ ಎಲ್ಲಾ ಪದಗಳು ಮತ್ತು ಪದಾವಳಿಗಳು ಅಧಿನಿಯಮದಲ್ಲಿ ಅವುಗಳಿಗೆ ಅನುಕ್ರಮವಾಗಿ ನೀಡಲಾದ ಅರ್ಥಗಳನ್ನೇ ಹೊಂದಿರತಕ್ಕದ್ದು.

3. **ಅರಿವು ಕಾರ್ಯಕ್ರಮ:–** (1) ಅಧಿನಿಯಮದ 12ನೇ ಪ್ರಕರಣದ ಉಪಬಂಧಗಳಿಗನುಸಾರವಾಗಿ ಅಮಾನವೀಯ ದುಷ್ಟ ಪದ್ಧತಿಗಳ ಮತ್ತು ವಾಮಾಚಾರದ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವನ್ನುಂಟು ಮಾಡಲು ಹಾಗೂ ಹಾನಿಗೊಳಗಾದ ಸಂತ್ರಸ್ತರಿಗೆ ತಾಲ್ಲೂಕು ಮ್ಯಾಜಿಸ್ಟ್ರೇಟರು, ಆಡಳಿತ, ಉಪ–ವಿಭಾಗೀಯ ಮ್ಯಾಜಿಸ್ಟ್ರೇಟ್ ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟ್ ಮತ್ತು ನೋಡಲ್ ಇಲಾಖೆಯ ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿಗಳನ್ನೊಳಗೊಂಡ ಜಿಲ್ಲಾಡಳಿತದ ಮೂಲಕ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಪರಿಹಾರವನ್ನು ಒದಗಿಸಲು ನೋಡಲ್ ಇಲಾಖೆಯು ಅರಿವು ಕಾರ್ಯಕ್ರಮಗಳನ್ನು ಕೈಗೊಳ್ಳತಕ್ಕದ್ದು.

(2) **ಜಾಗೃತ ಅಧಿಕಾರಿಯು,** ತನ್ನ ಅಧಿಕಾರ ವ್ಯಾಪ್ತಿಯ ಪ್ರದೇಶದಲ್ಲಿ ಅಮಾನವೀಯ ದುಷ್ಟ ಪದ್ಧತಿಗಳು ಮತ್ತು ವಾಮಾಚಾರ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳತಕ್ಕದ್ದು ಮತ್ತು ಹಾನಿಗೊಳಗಾದ ಸಂತ್ರಸ್ತರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಪರಿಹಾರವನ್ನು ಒದಗಿಸತಕ್ಕದ್ದು. ಜಿಲ್ಲಾಡಳಿತ ಎಂದರೆ, ತಾಲ್ಲೂಕು ಮ್ಯಾಜಿಸ್ಟ್ರೇಟ್, ಉಪ–ವಿಭಾಗೀಯ ಮ್ಯಾಜಿಸ್ಟ್ರೇಟ್ ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟ್ ಮತ್ತು ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿಗಳು ಇದಕ್ಕೆ ಸಂಬಂಧಿಸಿದಂತೆ ಜಾಗೃತಿ ಅಧಿಕಾರಿಗಳಿಗೆ ಹಣಕಾಸು ಮತ್ತು ಇತರೆ ನೆರವನ್ನು ನೀಡತಕ್ಕದ್ದು.

(3) ಹಿರಿಯ ಪೊಲೀಸ್ ಅಧಿಕಾರಿಗಳು ಎಂದರೆ, ಜಿಲ್ಲಾ ಪೊಲೀಸ್ ಅಧೀಕ್ಷಕರು, ಪೊಲೀಸ್ ಕಮೀಷನರೇಟ್‌ಗಳಲ್ಲಿರುವ ಪೊಲೀಸ್ ಉಪ–ಆಯುಕ್ತರುಗಳು ಮತ್ತು ಪೊಲೀಸ್ ಮಹಾ ನಿರೀಕ್ಷಕರ ದರ್ಜೆಯಲ್ಲಿರುವಂತ ಹಿರಿಯ ಪೊಲೀಸ್ ಅಧಿಕಾರಿಗಳು, ಈ ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅಧಿಸೂಚಿತ ಪೊಲೀಸ್ ಠಾಣೆಗಳ ಜಾಗೃತ ಅಧಿಕಾರಿಗಳು ಮತ್ತು ಇನ್ಸ್‌ಪೆಕ್ಟರ್‌ಗಳಿಗೆ ಮೇಲ್ವಿಚಾರಣೆ ಮಾಡತಕ್ಕದ್ದು ಹಾಗೂ ಮಾರ್ಗದರ್ಶನ ನೀಡತಕ್ಕದ್ದು.

(4) ಜಾಗೃತ ಅಧಿಕಾರಿಗಳು ಮತ್ತು ಅಧಿಸೂಚಿತ ಪೊಲೀಸ್ ಠಾಣೆಗಳ ಇನ್ಸ್‌ಪೆಕ್ಟರ್‌ಗಳು ಪುನರವಲೋಕನ ಮತ್ತು ಮೇಲ್ವಿಚಾರಣೆಯ ಉದ್ದೇಶಕ್ಕಾಗಿ ಈ ಅಧಿನಿಯಮದ ಅಡಿಯಲ್ಲಿನ ಪ್ರಕರಣಗಳ ವಿವರಗಳ ಬಗ್ಗೆ ಅವರ ಹಿರಿಯ ಅಧಿಕಾರಿಗಳಿಗೆ ವರದಿ ಮಾಡತಕ್ಕದ್ದು.

(5) ಅಧಿನಿಯಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮಾನ್ಯ ಸಚಿವರು, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಗೃಹ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಇತರೆ ಇಲಾಖೆಗಳ ಅಧಿಕಾರಿಗಳೊಂದಿಗೆ (ಅಗತ್ಯವಿದ್ದಲ್ಲಿ) ಅರ್ಧ ವಾರ್ಷಿಕ ಪುನರವಲೋಕನ ಸಭೆಯನ್ನು ನಡೆಸಬಹುದು.

(6) ರಾಜ್ಯದ ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು ಅರ್ಧವಾರ್ಷಿಕ ಪುನರವಲೋಕನ ಸಭೆಯ ಉದ್ದೇಶಕ್ಕಾಗಿ ಗೃಹ ಇಲಾಖೆಯ ಮೂಲಕ ನೋಡಲ್ ಇಲಾಖೆಗೆ ಅಂದರೆ ಸಮಾಜ ಕಲ್ಯಾಣ ಇಲಾಖೆಗೆ ಅನುಬಂಧ–1ರ ನಮೂನೆಯಲ್ಲಿ ದಾಖಲಾದ ಪ್ರಕರಣಗಳ ಕ್ರೋಢೀಕೃತ ಜಿಲ್ಲಾವಾರು ಮಾಹಿತಿಯನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶಂಭುಲಿಂಗಯ್ಯ)
ಸರ್ಕಾರದ ಉಪ ಕಾರ್ಯದರ್ಶಿ–1
ಸಮಾಜ ಕಲ್ಯಾಣ ಇಲಾಖೆ

## ಅನುಬಂಧ-1

**ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ನಿಯಮಗಳು, 2020ರ ಅಡಿಯಲ್ಲಿ ಬರುವ ಪ್ರಕರಣಗಳ ಸ್ಥಿತಿಗತಿಗಳ ಅರ್ಧವಾರ್ಷಿಕ ವಿವರಣಾ ಪಟ್ಟಿ.**

ಅವಧಿ ___________

| ಕ್ರ. ಸಂ | ಜಿಲ್ಲೆ | ನೊಂದಾಯಿತ ಪ್ರಕರಣಗಳ ಸಂಖ್ಯೆ | ಅವುಗಳಲ್ಲಿ | | | | | | |
|---|---|---|---|---|---|---|---|---|---|
| | | | ಯು/ಐ | ಯು/ಟಿ | ಸಿ/ಎಫ್ | ಅಪರಾಧಿ ಎಂದು ನಿರ್ಣೀತರಾದವರು | ಖುಲಾಸೆಗೊಂಡವರು | ಬಿ-ವರದಿ | ಇತರೆ |

ಟಿಪ್ಪಣಿ : ಯು/ಐ – ತನಿಖಾಧೀನ

ಯು/ಟಿ – ವಿಚಾರಣಾಧೀನ

ಸಿ/ಎಫ್ – ಸಲ್ಲಿಸಲಾದ ದೋಷರೋಪಣಾ ಪಟ್ಟಿ

(ಶಂಭುಲಿಂಗಯ್ಯ)
ಸರ್ಕಾರದ ಉಪ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ